# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1045 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 14/12/2023 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು. |

****

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಂಘಟಿತ ವಲಯದಲ್ಲಿ ಉದ್ಯೋಗ ಪಡೆಯುವುದಕ್ಕೆ ಬದಲಾಗಿ ಸ್ವಯಂ ಉದ್ಯೋಗ ಕೈಗೊಳ್ಳಲು ವಿದ್ಯಾವಂತ ಯುವಕರನ್ನು ಪ್ರೋತ್ಸಾಹಿಸಲು ಉದ್ಯೋಗ ವಿನಿಮಯಗಳಲ್ಲಿ ಸ್ವಯಂ ಉದ್ಯೋಗ ಘಟಕಗಳನ್ನು ಪರಿಚಯಿಸುವ ಯಾವುದಾದರೂ ಪ್ರಸ್ತಾವನೆ ಸರ್ಕಾರದಲ್ಲಿದೆಯೇ; | ಇಲ್ಲ |
| ಆ) | ನೋಂದಾಯಿತ ಉದ್ಯೋಗಾಕಾಂಕ್ಷಿಗಳು ಉದ್ಯೋಗವನ್ನು ಪಡೆದುಕೊಳ್ಳಲು ಉದ್ಯೋಗ ವಿನಿಮಯ ಘಟಕವು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿದೆಯೇ; | ಉದ್ಯೋಗ ವಿಭಾಗದಿಂದ ನೋಂದಾಯಿತ ಉದ್ಯೋಗಾಕಾಂಕ್ಷಿಗಳಿಗೆ ಸ್ಟಡಿ ಸರ್ಕಲ್, ವೃತ್ತಿ ಮಾಗದರ್ಶನ, ಉದ್ಯೋಗ ವಿನಿಮಯ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೌನ್ಸಿಲರರವರಿಂದ ಅಭ್ಯರ್ಥಿಗಳಿಗೆ ಶೈಕ್ಷಣಿಕ ಸಮಾಲೋಚನೆ ಮತ್ತು ಉದ್ಯೋಗಮೇಳಗಳ ಆಯೋಜನೆಗಳ ಮೂಲಕ ಉದ್ಯೋಗ ಪಡೆದುಕೊಳ್ಳಲು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲಾಗುತ್ತಿದೆ. |
| ಇ) | ಉದ್ಯೋಗಕ್ಕಾಗಿ ನೋಂದಾವಣೆ ಮಾಡಿಕೊಂಡ ಉದ್ಯೋಗಾಕಾಂಕ್ಷಿಗಳ ಸಂಖ್ಯೆ ಎಷ್ಟು ಮತ್ತು ಈ ಪೈಕಿ ಎಷ್ಟು ಜನರಿಗೆ ಕಳೆದ ಮೂರು ವರ್ಷಗಳಿಂದ ಉದ್ಯೋಗವನ್ನು ಒದಗಿಸಲಾಗಿದೆ; | ಅಕ್ಟೋಬರ್ 2023ರ ಅಂತ್ಯಕ್ಕೆ ರಾಜ್ಯದಲ್ಲಿ ಒಟ್ಟು 2,33,162 ಉದ್ಯೋಗಾಕಾಂಕ್ಷಿಗಳು ಉದ್ಯೋಗ ವಿನಿಮಯ ಕಚೇರಿಗಳಲ್ಲಿ ನೋಂದಾಯಿಸಿಕೊಂಡಿರುತ್ತಾರೆ.<br>2020-21ನೇ ಸಾಲಿನಲ್ಲಿ 9,322, 2021-22ನೇ ಸಾಲಿನಲ್ಲಿ 4,403 ಮತ್ತು 2022-23ನೇ ಸಾಲಿನಲ್ಲಿ 18,658 ಅಭ್ಯರ್ಥಿಗಳಿಗೆ ಉದ್ಯೋಗ ವಿನಿಮಯ ಕಚೇರಿಗಳ ಮುಖಾಂತರ ಉದ್ಯೋಗವನ್ನು ಒದಗಿಸಲಾಗಿದೆ. |

| | | |
|---|---|---|
| ಈ) | ರಾಜ್ಯದ ಯುವಜನತೆ ಉದ್ಯೋಗ ಪಡೆಯಲು ರೂಪಿಸಿರುವ ವಿಶೇಷ ಕಾರ್ಯಕ್ರಮದ ವಿವರಗಳೇನು? | ರಾಜ್ಯದ ಯುವಜನತೆ ಉದ್ಯೋಗ ಪಡೆಯಲು ರೂಪಿಸಿರುವ ವಿಶೇಷ ಕಾರ್ಯಕ್ರಮದ ವಿವರಗಳು ಈ ಕೆಳಗಿನಂತಿವೆ.<br>1) **ನೋಂದಣಿ ಮತ್ತು ಮಾರ್ಗದರ್ಶನ:** ಉದ್ಯೋಗಾಕಾಂಕ್ಷಿಗಳನ್ನು ಉದ್ಯೋಗ ವಿನಿಮಯ ಕೇಂದ್ರಗಳ ಮೂಲಕ ನೋಂದಾಯಿಸಿ ಕೊಳ್ಳಲಾಗುತ್ತಿದ್ದು, ಅವರ ವಿದ್ಯಾರ್ಹತೆಗೆ ತಕ್ಕಂತೆ ಲಭ್ಯವಿರುವ ಶಿಕ್ಷಣ / ತರಬೇತಿ ಸೌಲಭ್ಯ ಹಾಗೂ ಉದ್ಯೋಗಾವಕಾಶಗಳ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ವೃತ್ತಿ ಸಮಾಲೋಚನೆ ಸೌಲಭ್ಯ ನೀಡಲಾಗುತ್ತಿದೆ.<br><br>2) **ಸ್ಟಡಿ ಸರ್ಕಲ್:-** ಸಾರ್ವಜನಿಕ ವಲಯದಲ್ಲಿ ಹೆಚ್ಚಿನ ನೇಮಕಾತಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನಡೆಯುತ್ತಿರುವುದರಿಂದ ಅದರಲ್ಲೂ ಗ್ರಾಮೀಣ ಭಾಗದ ಅಭ್ಯರ್ಥಿಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಕೇಂದ್ರ ಲೋಕಸೇವಾ ಆಯೋಗ, ಕರ್ನಾಟಕ ಲೋಕಸೇವಾ ಆಯೋಗ, ಸಿಬ್ಬಂದಿ ನೇಮಕಾತಿ ಆಯೋಗ, ರೈಲ್ವೆ ಇಲಾಖೆ, ರಕ್ಷಣಾ ಪಡೆ ಮತ್ತು ಬ್ಯಾಂಕಿಂಗ್ ಕ್ಷೇತ್ರದಲ್ಲಿ ಎಲ್ಲಾ ವರ್ಗದ (ಗ್ರೂಪ್-ಎ, ಬಿ & ಸಿ) ನೇಮಕಾತಿಗಾಗಿ ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಪರೀಕ್ಷಾ ಪೂರ್ವ ತರಬೇತಿಗಳನ್ನು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗಳಲ್ಲಿ ಸ್ಟಡಿ ಸರ್ಕಲ್ ಕಾರ್ಯಕ್ರಮದಡಿ ಸಂಬಂಧಿತ ಸ್ಪರ್ಧಾತ್ಮಕ ಪರೀಕ್ಷೆಗಳ ಪಠ್ಯಕ್ರಮವನ್ನು ನುರಿತ ಸಂಪನ್ಮೂಲ ವ್ಯಕ್ತಿಗಳ ಉಪನ್ಯಾಸದ ಮೂಲಕ ತರಬೇತಿ ಒದಗಿಸಲಾಗುತ್ತಿದೆ.<br><br>3) **ಉದ್ಯೋಗ ಮೇಳ:-** ಉದ್ಯೋಗಾಕಾಂಕ್ಷಿಗಳು ಮತ್ತು ನಿಯೋಜಕರನ್ನು ಒಂದೇ ವೇದಿಕೆಯಡಿ ತರಲು ನೇರ ಸಂದರ್ಶನ, ಅಧಿಸೂಚಿತ ಹುದ್ದೆಗಳಿಗೆ ಪುರಸ್ಕರಣೆ ಹಾಗೂ ಉದ್ಯೋಗ ಮೇಳಗಳನ್ನು ಪ್ರತಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗಳ ಮೂಲಕ ಆಯೋಜಿಸಲಾಗುತ್ತಿದ್ದು, ಉದ್ಯೋಗಾಕಾಂಕ್ಷಿಗಳು ಅವರವರ ಶೈಕ್ಷಣಿಕ ಅರ್ಹತೆ ಅನುಸಾರ ಖಾಸಗಿ ಕ್ಷೇತ್ರದ ಉದ್ಯೋಗದಾತರನ್ನು ಸಂಪರ್ಕಿಸಿ ಉದ್ಯೋಗ ಪಡೆದುಕೊಳ್ಳುವ ಅವಕಾಶ ಕಲ್ಪಿಸಲಾಗುತ್ತಿದೆ. ಇದರಿಂದ ಉದ್ಯೋಗಾವಕಾಶಗಳ ಲಭ್ಯತೆ ಮತ್ತು ಅಗತ್ಯ ಮಾನವ ಸಂಪನ್ಮೂಲಗಳ ನೇಮಕಕ್ಕೆ ಅವಕಾಶ ಕಲ್ಪಿಸಲಾಗುತ್ತಿದೆ. |

| | | |
|---|---|---|
| | | **4) ಮಾದರಿ ವೃತ್ತಿ ಕೇಂದ್ರಗಳು:-** ಶೇಕಡ 100ರ ಕೇಂದ್ರ ಸರ್ಕಾರದ ಅನುದಾನ ಬಳಸಿಕೊಂಡು 2022-2023ರ ಅಂತ್ಯಕ್ಕೆ ಒಟ್ಟು 13 ಉದ್ಯೋಗ ವಿನಿಮಯ ಕಚೇರಿಗಳನ್ನು ಮಾದರಿ ವೃತ್ತಿ ಕೇಂದ್ರಗಳನ್ನಾಗಿ ಪರಿವರ್ತಿಸಲಾಗಿದ್ದು, ಮೈಸೂರು, ಹುಬ್ಬಳ್ಳಿ-ಧಾರವಾಡ, ಹಾಸನ, ಕಲಬುರಗಿ, ತುಮಕೂರು, ಕೋಲಾರ, ದಾವಣಗೆರೆ, ಮಂಗಳೂರು ಮತ್ತು ಬಳ್ಳಾರಿ, ಬೆಳಗಾವಿ, ಬಾಗಲಕೋಟೆ, ಕೊಪ್ಪಳ ಮತ್ತು ಮಂಡ್ಯ ಹೀಗೆ 13 ಮಾದರಿ ವೃತ್ತಿ ಕೇಂದ್ರಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸಂಬಂಧಿಸಿದ ಜಿಲ್ಲೆಗಳ ಉದ್ಯೋಗಾಕಾಂಕ್ಷಿಗಳಿಗೆ ಸಮಾಲೋಚನೆ, ಅಲ್ಪಾವಧಿ ಕೌಶಲ್ಯ ತರಬೇತಿ ಹಾಗೂ ಉದ್ಯೋಗ ಮೇಳಗಳ ಆಯೋಜನೆ ಮೂಲಕ ಉದ್ಯೋಗಾವಕಾಶಗಳನ್ನು ಒದಗಿಸಲಾಗುತ್ತದೆ. |

**ಸಂಖ್ಯೆ: ಕೌಉಜೀಇ 78 ಕೈತಪ್ರ 2023**

(ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.